ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 76 ರಾಲೆಪ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 31.03.2022.

## ಅಧಿಸೂಚನೆ

ವಿಷಯ: ದಿನಾಂಕ:01.01.2022 ರಲ್ಲಿರುವಂತೆ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಪ್ರಧಾನ ನಿರ್ದೇಶಕರ ವೃಂದದ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 11 ಎಆರ್‌ಬಿ 2021, ದಿನಾಂಕ 30.11.2021.
2. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ ಇವರ ಪತ್ರ ಸಂಖ್ಯೆ ಸಿಎಸ್‌ಎ 01 ಸಿನೇ (ಜಾಕೋ) ಪ್ರನಿ 2021/2898, ದಿನಾಂಕ 01.02.2022.

**********

ಉಲ್ಲೇಖ (1) ರ ದಿನಾಂಕ 30.12.2021 ರ ಅಧಿಸೂಚನೆಯಲ್ಲಿ ಕರ್ನಾಟಕ ಸರ್ಕಾರದ (ಕೆಲಸಗಳ ಹಂಚಿಕೆ) ನಿಯಮಗಳು, 1977 ರ ಅನುಸೂಚಿ II ರಲ್ಲಿ "ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ" ಶೀರ್ಷಿಕೆಯ ಅಡಿಯಲ್ಲಿ "ಎ.ಸಾರ್ವಜನಿಕ ಸೇವೆಗಳು" ಉಪ ಶೀರ್ಷಿಕೆಯಡಿ, ಕ್ರಮ ಸಂಖ್ಯೆ 6 ರಲ್ಲಿನ "ಮತ್ತು ಇಲಾಖಾ ಮುಖ್ಯಸ್ಥರ ದರ್ಜೆಯ ಎಲ್ಲಾ ಅಧಿಕಾರಿಗಳ" ಎಂಬ ಪದಗಳನ್ನು ಕೈಬಿಡಲಾಗಿದೆ. ಅದರಂತೆ, ಇಲಾಖಾ ಮುಖ್ಯಸ್ಥರ ಸೇವಾ ವಿಷಯಗಳ ಬಗ್ಗೆ ಸಂಬಂಧಪಟ್ಟ ಇಲಾಖೆಗಳೇ ಕ್ರಮವಹಿಸಬೇಕಾಗಿರುತ್ತದೆ.

ಪ್ರಧಾನ ನಿರ್ದೇಶಕರು ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ ಇವರು ದಿನಾಂಕ 01-01-2022 ರಲ್ಲಿರುವಂತೆ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಪ್ರಧಾನ ನಿರ್ದೇಶಕರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಅನುಬಂಧದಲ್ಲಿರುವಂತೆ ಪ್ರಕಟಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಆದ್ದರಿಂದ, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆಯ ಪ್ರಧಾನ ನಿರ್ದೇಶಕರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಅನುಬಂಧದಲ್ಲಿರುವಂತೆ ಪ್ರಕಟಿಸಲಾಗಿದೆ. ಈ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಭಾದಿತರಾದ ಅಧಿಕಾರಿಗಳು ಆಕ್ಷೇಪಣೆಗಳನ್ನು ಲಿಖಿತ ಮೂಲಕ ಈ ಅಧಿಸೂಚನೆ ಪ್ರಕಟಿಸಲಾದ ದಿನಾಂಕದಿಂದ 15 ದಿನಗಳೊಳಗಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು, ಇವರಿಗೆ ಸಲ್ಲಿಸತಕ್ಕದ್ದು. ನಂತರ ಸ್ವೀಕರಿಸಿದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ, 15 ದಿನಗಳೊಳಗಾಗಿ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗದಿದ್ದಲ್ಲಿ ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನೇತ್ರಪ್ರಭಾ ಎಂ. ಧಾಯಪುಲೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

ಪ್ರಧಾನ ನಿರ್ದೇಶಕರ ಕಛೇರಿ
ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು
ಲೆಕ್ಕಪತ್ರ ಇಲಾಖೆ, ಬೆಂಗಳೂರು
01 APR 2022
ಪ್ರಧಾನ ... ಶಕರು

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವ ಸಲುವಾಗಿ ಕಳುಹಿಸಲಾಗಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು, (ಎ & ಯು) (ಎ & ಇ) 1&2, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು
3. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
4. ಸಂಬಂಧಿಸಿದ ಅಧಿಕಾರಿಗೆ – ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ ಇವರ ಮುಖಾಂತರ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಅನುಬಂಧ

| ದಿನಾಂಕ 01.01.2022 ರಲ್ಲಿದ್ದಂತೆ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಪ್ರಧಾನ ನಿರ್ದೇಶಕರ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿ. | | | | | |
|---|---|---|---|---|---|
| ಕ್ರಮ ಸಂಖ್ಯೆ | ಹೆಸರು | ನೇರ ನೇಮಕಾತಿ/ ಮುಂಬಡ್ತಿ/ ಇತರೆ | ಜನ್ಮ ದಿನಾಂಕ | ಸೇವೆಗೆ ಸೇರಿದ ದಿನಾಂಕ | ಮುಂಬಡ್ತಿ ಅರ್ಹತಾ ದಿನಾಂಕ |
| 1 | ದೀಪಕ್ ದೊರೆಯವರ್ | ಮುಂಬಡ್ತಿ | 09.04.1965 | 25.11.1991 | 12.07.2021 |

(ನೇತ್ರಪ್ರಭಾ ಎಂ. ಧಾಯಪುಲೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ(ಆಡಳಿತ ಮತ್ತು ಮುಂಗಡಗಳು)